# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST | ಇದು ಸುದ್ದಿ ವಿಲಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 173 | Pages. 2 | Date: 17-06-2026, WEDNESDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 173 – ಪುಟಗಳು : 2 | 17-06-2026 ಬುಧವಾರ | Ph: 8762954248 | ದರ : ₹1


## ಪೌರ ಕಾರ್ಮಿಕರಿಗೆ ಕಡ್ಡಾಯವಾಗಿ ಚಿಕಿತ್ಸಾ ಸೌಲಭ್ಯ ಸಿಗಲಿ

### ರಾಜ್ಯ ಸಫಾಯಿ ಕರ್ಮಚಾರಿ ನಿಗಮದ ಅಧ್ಯಕ್ಷ ಮುರುಳಿ ಅಶೋಕ್ ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪೌರ ಕಾರ್ಮಿಕರಿಗೆ ಉತ್ತಮ ಚಿಕಿತ್ಸಾ ಸೌಲಭ್ಯ ಒದಗಿಸಲಾಗುತ್ತಿದ್ದು, ನಿರ್ಲಕ್ಷ್ಯ ವಹಿಸದೆ ಪ್ರಯೋಜನ ಪಡೆಯಬೇಕು ಎಂದು ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುರುಳಿ ಅಶೋಕ್ ಸಾಲಪ್ಪ ತಿಳಿಸಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ ಮತ್ತು ಮಹಾನಗರ ಪಾಲಿಕೆಯಿಂದ ಮಂಗಳವಾರ ಹಮ್ಮಿಕೊಂಡಿದ್ದ ನೇರ ಪಾವತಿ ಪೌರಾಕಾರ್ಮಿಕ ಆರೋಗ್ಯ ತಪಾಸಣೆ ಶಿಬಿರ ಮತ್ತು ಅರಿವು ಕಾರ್ಯಕ್ರಮ ಹಾಗೂ ಆರೋಗ್ಯ ವಿಮೆ ಕಾರ್ಡ್ ವಿತರಣೆ ಸಮಾರಂಭದಲ್ಲಿ ಮಾತನಾಡಿ, ನಿವೃತ್ತಿ ಹೊಂದುವ ಮುಂಚೆ ಆರೋಗ್ಯ ಸಮಸ್ಯೆಯನ್ನು ಬಗೆಹರಿಸಿಕೊಂಡು ಉತ್ತಮ ಆರೋಗ್ಯ ಪಡೆದುಕೊಂಡು ನಿವೃತ್ತರಾಗಿ ಎಂದು ತಿಳಿಸಿದರು.

ಎಲ್ಲಾ ಪೌರಕಾರ್ಮಿಕರು ತಮ್ಮ ಹಕ್ಕುಗಳನ್ನು ಕೇಳಿ ಪಡೆಯಬೇಕು. ಕರ್ನಾಟಕದಲ್ಲಿ ಮಲಮೂತ್ರಗಳನ್ನು ನೇರವಾಗಿ ತೆಗೆಯುವ ಪೌರಕಾರ್ಮಿಕರನ್ನು ಗುರುತಿಸಿ ಆರೋಗ್ಯ ವಿಮಾ ಕಾರ್ಡ್ ಅನ್ನು ಕಡ್ಡಾಯವಾಗಿ ನೀಡಬೇಕು ಎಂದು ತಿಳಿಸಿದರು.

ಪೌರಕಾರ್ಮಿಕರ ಆರ್ಥಿಕ ಸ್ಥಿತಿಗತಿ ಉತ್ತಮ ಪಡಿಸುವ ನಿಟ್ಟಿನಲ್ಲಿ 2026-27ನೇ ಸಾಲಿನಲ್ಲಿ ಖಾಯಂ ನಾಯಕತ್ವದ ಹಕ್ಕು ಪತ್ರಗಳ ಆಧಾರದ ಮೇಲೆ 10 ಲಕ್ಷ ರೂ. ವೆಚ್ಚದ ಮನೆ ನಿರ್ಮಾಣ ಮಾಡಿಕೊಡುವುದಾಗಿ ಪೌರ ಕಾರ್ಮಿಕರಿಗೆ ಭರವಸೆ ನೀಡಿದರು.



ಮಧ್ಯವರ್ತಿಗಳ ಹಾವಳಿ ತಪ್ಪಿಸುವ ನಿಟ್ಟಿನಲ್ಲಿ ಕುಟುಂಬದ ರಕ್ಷಣೆ ಮಾಡವಂತಹ ವಸ್ತುರೂಪದಲ್ಲಿ ಪೌರಕಾರ್ಮಿಕರಿಗೆ ಸಹಾಯ ಮಾಡಿ ಭವಿಷ್ಯ ಉಜ್ವಲಗೊಳಿಸುವ ಆಶ್ವಾಸನೆ ನೀಡಿ ಪೌರಕಾರ್ಮಿಕ ಮಕ್ಕಳಿಗೆ ಜಟ್ಟಿಂಗ್ ಮಿಷನ್ ವಿತರಣೆ ಮಾಡುವ ಮೂಲಕ ಕುಟುಂಬವನ್ನು ಆರ್ಥಿಕವಾಗಿ ಅಭಿವೃದ್ಧಿಪಡಿಸುವುದಾಗಿ ತಿಳಿಸಿದರು.

ಪ್ರತಿಯೊಬ್ಬ ಪೌರಕಾರ್ಮಿಕರ ಮಕ್ಕಳು ಪ್ರೌಢ ಮಟ್ಟದ ಶಿಕ್ಷಣವನ್ನು ಕಡ್ಡಾಯವಾಗಿ ಪಡೆಯಬೇಕು, ಹತ್ತನೇ ತರಗತಿ ಒಳಗೆ ವಿದ್ಯಾಭ್ಯಾಸ ಮಾಡುವಂತಹ ಮಕ್ಕಳಿಗೆ ಸಂಜೆ ನಂತರ ಕೋಚಿಂಗ್ ಕ್ಲಾಸ್‌ಗಳನ್ನು ಮಾಡಿ ಶೈಕ್ಷಣಿಕವಾಗಿ ಉತ್ತೇಜಿಸುತ್ತೇವೆ ಎಂದು ಹೇಳಿದರು.

ಕೆ.ಎಂ.ಎಫ್ ಮಿಲ್ಕ್ ಬೂತ್ ಗಳನ್ನು ಸ್ಥಾಪನೆ ಮಾಡುವಂತೆ ಹಾಗೂ ಯುವಕರಿಗೆ ಆಟೋ ರಿಕ್ಷಾಗಳನ್ನು ನೀಡುವ ಮೂಲಕ ಕುಟುಂಬದ ಜವಾಬ್ದಾರಿಯನ್ನು ನಿಭಾಯಿಸಿಕೊಂಡು ಹೋಗುವಂತಹ ಮಾರ್ಗಸೂಚನೆ ನೀಡುತ್ತೇವೆ ಎಂದು ತಿಳಿಸಿದರು.

ಸಾಮಾಜಿಕ ಜಾಲತಾಣದಲ್ಲಿ ಉತ್ತಮ ಕಲೆಯನ್ನು ಪ್ರದರ್ಶಿಸುವಂತಹ ಪೌರಕಾರ್ಮಿಕ ಮಕ್ಕಳಿಗೆ 5 ಲಕ್ಷ ರೂ. ವೆಚ್ಚದ ಕ್ಯಾಮರಾ, ಡ್ರೋನ್, ಕಂಪ್ಯೂಟರ್, ಸ್ಪೀಕರ್ ಇತ್ಯಾದಿ ಸೌಲಭ್ಯಗಳನ್ನು ಮಾಡಿಕೊಡುತ್ತೇವೆ. ಇವೆಂಟ್ ಫೋಟೋಗ್ರಾಫಿ ಸ್ಟುಡಿಯೋಗಳನ್ನು ಮಾಡಿಕೊಂಡು ಆರ್ಥಿಕವಾಗಿ ವೃತ್ತಿ ಬದಲಾವಣೆ ಮಾಡುವಂತಹ ಕೆಲಸ ಮಾಡುತ್ತೇವೆ ಎಂದು ತಿಳಿಸಿದರು.

ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ಗೌರವ ಸಲಹೆಗಾರ ಟಿ. ಕುಮಾರ್ ಮಾತನಾಡಿ, ಕಾರ್ಮಿಕರು ಅನಾರೋಗ್ಯಕ್ಕೆ ತುತ್ತಾದಂತಹ ಸಂದರ್ಭದಲ್ಲಿ ಬೆಂಗಳೂರಿನಿಂದ ಡೆಲ್ಲಿಯವರೆಗೂ ಉಚಿತ ಉತ್ತಮ ಚಿಕಿತ್ಸೆ ಯನ್ನು ಪಡೆಯುವಂತಹ ಸೌಲಭ್ಯ ಮಾಡಿ ಕೊಡಲಾಗಿದೆ ಎಂದು ತಿಳಿಸಿದರು.

ಆರೋಗ್ಯ ವಿಮಾ ಕಾರ್ಡ್‌ನಲ್ಲಿ ಒಟ್ಟು ಐದು ಲಕ್ಷದ ಒಳಗಿನ ಚಿಕಿತ್ಸೆ ಯನ್ನು ಸರ್ಕಾರದಿಂದ ಉಚಿತವಾಗಿ ನೀಡಲಾಗುತ್ತದೆ ಹಾಗೂ ಉತ್ತಮ ಚಿಕಿತ್ಸೆ ಪಡೆಯಬಹುದಾಗಿದೆ. ಐ.ಪಿ.ಡಿ ಸಾಲಪ್ಪ ವರದಿ ಪೌರ ಕಾರ್ಮಿಕರಿಗೆ ಸಹಕಾರಿಯಾಗುವಂತಹ ಸೌಲಭ್ಯಗಳನ್ನು ನೀಡುವುದು ಮಾತ್ರ ಅಲ್ಲದೆ ರಕ್ಷಣೆಯನ್ನು ನೀಡುತ್ತದೆ. ಕೇವಲ ಆರೋಗ್ಯ ಕಾರ್ಡ್ ಮಾತ್ರವಲ್ಲ. ಅದು 5 ಲಕ್ಷ ರೂ. ಹಣ ಇರುವ ಎ.ಟಿ.ಎಂ ಇದ್ದಂತೆ ಎಂದರು.

ಆರೋಗ್ಯ ವಿಮಾ ಯೋಜನೆಯನ್ನು ಈಗಾಗಲೇ 20 ಜಿಲ್ಲೆಗಳಲ್ಲಿ ನೀಡಲಾಗಿದೆ ಹಾಗಾಗಿ ಪೌರಕಾರ್ಮಿಕರು ಆರೋಗ್ಯದ ಕಡೆಗೆ ಗಮನವಹಿಸಿ ಹಾಗೂ ಪೌರ ಕಾರ್ಮಿಕರು ಸುರಕ್ಷತಾ ಪರಿಕರಗಳನ್ನು ಬಳಸಿ ತಮ್ಮ ಆರೋಗ್ಯವನ್ನು ಉಳಿಸಿಕೊಳ್ಳಿ ಎಂದು ಹೇಳಿದರು.

ಮಹಾನಗರ ಪಾಲಿಕೆಯ ಆಯುಕ್ತ ಆರ್. ಕೃಷ್ಣಮೂರ್ತಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಕುಟುಂಬದ ಆಸ್ತಿ ಬಹಿರಂಗಪಡಿಸಲು ರೇವಣ್ಣ ಸವಾಲು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಆಸ್ತಿ ದಾಖಲೆ ಬಹಿರಂಗಪಡಿಸುವುದಾಗಿ ಮಾಜಿ ಸಚಿವರೊಬ್ಬರು ಹೇಳಿದ್ದಾರೆ. ನಮ್ಮ ಕುಟುಂಬದವರ ಎಲ್ಲರ ಆಸ್ತಿ ವಿವರ ಸರ್ಕಾರದ ಬಳಿ ಇದೆ. ಅದನ್ನು ಸಾರ್ವಜನಿಕವಾಗಿ ಬಿಡುಗಡೆ ಮಾಡಲಿ ಎಂದು ಮಾಜಿ ಸಚಿವ ಹೆಚ್.ಡಿ. ರೇವಣ್ಣ ಸವಾಲೆಸೆದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಜಿಲ್ಲೆಯಲ್ಲಿ ಎರಡೂವರೆ ಸಾವಿರಕ್ಕೂ ಅಧಿಕ ಕಂದಾಯ ಇಲಾಖೆ ಕಡತಗಳು ಜಿಲ್ಲಾಧಿಕಾರಿ ಸಹಿಗಾಗಿ ಬಾಕಿ ಉಳಿದಿವೆ. ಗೋಮಾಳ ಜಾಗವನ್ನು ಬೇಕಾಬಿಟ್ಟಿ ಖಾತೆ ಮಾಡಿಕೊಡಲಾಗುತ್ತಿದೆ. ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ಹೇಳುವವರು ಕೇಳುವವರು ಯಾರೂ ಇಲ್ಲದೆ ಜಿಲ್ಲೆ ತಬ್ಬಲಿಯಾಗುತ್ತಿದೆ ಎಂದು ದೂರಿದರು.

ಕಳೆದ ಮೂರು ವರ್ಷಗಳಲ್ಲಿ ಎರಡು ಬಾರಿ ಮುಖ್ಯಮಂತ್ರಿ ಜಿಲ್ಲೆಗೆ ಭೇಟಿ ನೀಡಿ ಕ್ರಾಂತಿಕಾರಿ ಬದಲಾವಣೆ ಆಗಿದೆ ಎಂದಿದ್ದರು. ಎಲ್ಲಿ ಕ್ರಾಂತಿ ಆಗಿದೆ ಎಂಬುದನ್ನು ಬಹಿರಂಗಪಡಿಸಬೇಕು ಎಂದರು.


ರೈತರಿಗೆ ರಸಗೊಬ್ಬರ ಕೊಡಿಸಲು ಸಚಿವರು, ಮುಖ್ಯಮಂತ್ರಿ ಬರುವುದಾದರೆ ಜಿಲ್ಲಾಡಳಿಯ ಏಕೆ ಇರಬೇಕು. ನಾನು ಮಂತ್ರಿಯಾಗಿದ್ದಾಗ ಆರು ತಿಂಗಳ ಮೊದಲೇ ರಸಗೊಬ್ಬರ ದಾಸ್ತಾನು ಇರಿಸುತ್ತಿದ್ದೆ. ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಂದಲೇ ಶೇ. 80ರಷ್ಟು ಗೊಬ್ಬರ ವಿತರಣೆಯಾಗಬೇಕು. ಕೃಷಿ, ತೋಟಗಾರಿಕೆ ಇಲಾಖೆ ಅಧಿಕಾರಿಗಳ ಸಭೆ ನಡೆಸುವುದಿಲ್ಲ.

ಮಧ್ಯವರ್ತಿಗಳು ರೈತರಿಂದ ಬೇಕಾಬಿಟ್ಟಿ ಹಣ ವಸೂಲಿ ಮಾಡುತ್ತಿದ್ದಾರೆಂದು ಆರೋಪಿಸಿದರು.

ಫಲವತ್ತಾದ ಭೂಮಿ ದುರುಪಯೋಗ ಆಗಬಾರದೆಂಬ ಕಾರಣಕ್ಕೆ ಬಿಡದಿ ಟೌನ್‌ಶಿಪ್ ಯೋಜನೆಗೆ ವಿರೋಧಿಸುತ್ತಿದ್ದೇವೆ. ಯೋಜನೆ ವಿರೋಧಿಸಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಸ್ಥಳೀಯ ನಾಯಕರೊಂದಿಗೆ ಹೋರಾಟ ಮಾಡುತ್ತಿದ್ದಾರೆ. ಕುಮಾರಸ್ವಾಮಿ ಆ ಜಿಲ್ಲೆಯಲ್ಲಿ ಮೂವತ್ತು ವರ್ಷಗಳ ಕಾಲ ಶಾಸಕರಾಗಿ, ಲೋಕಸಭಾ ಸದಸ್ಯರಾಗಿದ್ದಾರೆ. ಅಲ್ಲಿಯ ಪರಿಸ್ಥಿತಿ ಏನೆಂಬುದು ಗೊತ್ತಿದೆ, ನನಗೇನು ಗೊತ್ತಿಲ್ಲ. ಅಲ್ಲಿ ಏನೇನಿದೆ, ಬೆಳೆ ಎಷ್ಟಿದೆ ಎಂದು ಅವರಿಗೆ ಗೊತ್ತಿದೆ. ಫಲವತ್ತಾದ ಭೂಮಿ ಸ್ವಾಧೀನಪಡಿಕೊಂಡು ಟೌನ್ ಶಿಪ್ ಮಾಡುವುದು ಸೂಕ್ತವಲ್ಲ ಎಂದರು.

ಜೆಡಿಎಸ್‌ನಿಂದ ಹಮ್ಮಿಕೊಂಡಿರುವ ಪಾದಯಾತ್ರೆಯಲ್ಲಿ ಭಾಗವಹಿಸುವ ಕುರಿತು ಪ್ರತಿಕ್ರಿಯಿಸಿದ ಅವರು, ಪಕ್ಷ ಏನು ಹೇಳುತ್ತೋ ಅದನ್ನು ಮಾಡುತ್ತೇವೆ. ಅಲ್ಲಿ ಏನು ನಡೆಯುತ್ತಿದೆ ಎಂಬುದು ನನಗೆ ಗೊತ್ತಿಲ್ಲ. ನಾನು ನಮ್ಮ ಜಿಲ್ಲೆಯಲ್ಲಿ ರೈತರಿಗೆ ತೊಂದರೆ ಆಗುತ್ತಿರುವುದನ್ನು ನಿಮ್ಮ ಗಮನಕ್ಕೆ ತರುತ್ತಿದ್ದೇನೆ ಅಷ್ಟೇ ಎಂದರು.

## ರೈಲು ಡಿಕ್ಕಿಯಾಗಿ ಮಹಿಳೆ ಸಾವು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ರೈಲ್ವೆ ಹಳಿ ಪಕ್ಕ ಹೋಗುತ್ತಿದ್ದಾಗ ಚಲಿಸುವ ರೈಲು ತಾಗಿದ್ದರಿಂದ ಮಹಿಳೆ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಹಿರೀಸಾವೆಯಲ್ಲಿ ನಡೆದಿದೆ.

ತಾಲ್ಲೂಕಿನ ಬೂಕ ಗ್ರಾಮದ ರಾಜಮ್ಮ (48) ಮೃತರು. ಸೋಮವಾರ ಸಂಜೆ ಹಿರೀಸಾವೆಯಿಂದ ತರಕಾರಿ ತೆಗೆದುಕೊಂಡು ಮನೆಗೆ ಹೋಗುತ್ತಿದ್ದರು.

ರೈಲ್ವೆ ಮಾರ್ಗದ ಪಕ್ಕದಲ್ಲಿಯೇ ಮನೆ ಇದ್ದು, ಮಾರ್ಗದಲ್ಲಿ ನಡೆದುಕೊಂಡು ಹೋಗುತ್ತಿದ್ದ ವೇಳೆ ಹಾಸನದಿಂದ ಬೆಂಗಳೂರಿಗೆ ತೆರಳುತ್ತಿದ್ದ ಮೆಮ್ ರೈಲ್ ಹಿಂದಿನಿಂದ ತಾಗಿದೆ. ತಲೆಗೆ ಬಲವಾದ ಪೆಟ್ಟು ಬಿದ್ದಿದ್ದರಿಂದ ರಾಜಮ್ಮ ಮೃತಪಟ್ಟಿದ್ದಾರೆ.

ಬೆಳ್ಳೂರು ಕ್ರಾಸ್‌ನಲ್ಲಿರುವ ಆದಿಚುಂಚನಗಿರಿ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ ಕುಟುಂಬಸ್ಥರಿಗೆ ಮೃತದೇಹ ಹಸ್ತಾಂತರಿಸಲಾಯಿತು. ರೈಲ್ವೆ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

## ದುಶ್ಚಟಗಳಿಂದ ದೂರ ಇರುವಂತೆ ಯುವಕರಿಗೆ ಸಲಹೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಯುವಕರು ದಾರಿ ತಪ್ಪಿದರೆ ಸಮಾಜದ ಮೇಲೆ ದುಷ್ಪರಿಣಾಮ ಬೀರುತ್ತದೆ ಎಂದು ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಭಾರ ಪ್ರಾಂಶುಪಾಲ ಚಂದ್ರಶೇಖರ್ ಹೇಳಿದರು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯಿಂದ ಮಂಗಳವಾರ ನಡೆದ ವಿಶ್ವ ತಂಬಾಕು ವಿರೋಧಿ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಯುವಕರು ದಾರಿ ತಪ್ಪಬಾರದು. ಸಮಾಜದಲ್ಲಿ ಕೆಲ ದುಷ್ಟ ಶಕ್ತಿಗಳು ಯುವಕರನ್ನು ಅಡ್ಡದಾರಿಗೆ ಎಳೆಯುತ್ತವೆ. ಈ ಬಗ್ಗೆ ಜಾಗೃತಿ ಮೂಡಿಸಬೇಕಕು. ತಂದೆ-ತಾಯಿ ಮಕ್ಕಳ ಭವಿಷ್ಯದ ಬಗ್ಗೆ ಕನಸು ಹೊಂದಿರುತ್ತಾರೆ. ಅವರ ಆಸೆಗೆ ತಣ್ಣೀರು ಎರಚಬೇಡಿ, ವಿದ್ಯಾರ್ಥಿಗಳು ಆಕರ್ಷಣೆಗೆ, ಸ್ನೇಹಿತರ ಬಲವಂತಕ್ಕೆ ದುಶ್ಚಟಗಳಿಗೆ ಬಲಿಯಾಗಿ ಆರೋಗ್ಯ, ನೆಮ್ಮದಿ ಹಾಗೂ ಭವಿಷ್ಯವನ್ನು ಹಾಳು ಮಾಡಿಕೊಳ್ಳಬಾರದು ಎಂದರು.




ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ ಸಂಚಾಲಕ ಎ.ಎಂ.ಜಯರಾಮ್ ಮಾತನಾಡಿ, ತಾಲ್ಲೂಕಿನಲ್ಲಿ ಅನೇಕ ವಿದ್ಯಾರ್ಥಿಗಳು ಸಹವಾಸ ದೋಷದಿಂದ ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ. ಅವರ ಸುಂದರ ಭವಿಷ್ಯದ ಕನಸು ನುಚ್ಚುನೂರಾಗಿದೆ. ಯುವ ಶಕ್ತಿ ಸದ್ಬಳಕೆಯಾಗಬೇಕು, ಗ್ರಾಮೀಣ ಭಾಗದಲ್ಲಿ ಹೆಣ್ಣು ಮಕ್ಕಳು ಈ ದುಶ್ಚಟಕ್ಕೆ ಬಲಿಯಾಗುತ್ತಿರುವುದು ಆತಂಕಕಾರಿಯಾಗಿದೆ ಎಂದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಯೋಜನಾಧಿಕಾರಿ ಚೇತನ್ ಮಾತನಾಡಿ, ಧರ್ಮಸ್ಥಳದ ಡಾ. ವೀರೇಂದ್ರ ಹೆಗ್ಗಡೆ ಅವರ ಮಾರ್ಗದರ್ಶನದಲ್ಲಿ ಸಾಮಾಜಿಕ, ಶೈಕ್ಷಣಿಕ, ಧಾರ್ಮಿಕ, ಆರ್ಥಿಕ, ಮದ್ಯವರ್ಜನ ಶಿಬಿರ ಹಾಗು ಜನಪರ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸುತ್ತಿದೆ. ಜೂ. 30ರಂದು ರಾಜ್ಯಾದ್ಯಂತ 1000 ಶಾಲಾ ಕಾಲೇಜುಗಳಲ್ಲಿ ವಿಶ್ವ ಮಾದಕ ವಸ್ತು ವಿರೋಧಿ ದಿನಾಚರಣೆ ನಡೆಸಲು ಯೋಜನೆ ಹಾಕಿಕೊಳ್ಳಲಾಗಿದೆ ಎಂದರು.

ಉಪನ್ಯಾಸಕರಾದ ರಂಗಸ್ವಾಮಿ, ದೀಪಕ್, ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಸಂಯೋಜಕ ರಮೇಶ್, ಸೇವಾ ಪ್ರತಿನಿಧಿಗಳಾದ ಆಶಾ, ವಸಂತ ಮುಂತಾದವರಿದ್ದರು.

## ಕರ್ತವ್ಯ ಆ್ಯಪ್‌ನಲ್ಲಿ ಹಾಜರಾತಿ ಕಡ್ಡಾಯ

### ಜಿಲ್ಲಾಧಿಕಾರಿ ಲತಾಕುಮಾರಿ ಸೂಚನೆ | ಕರ್ತವ್ಯ ಲೋಪ ಕ್ಷಮಿಸಲ್ಲ ಎಂದು ಎಚ್ಚರಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸರ್ಕಾರಿ ಕಚೇರಿಗಳ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ಪ್ರತಿದಿನ ಬೆಳಿಗ್ಗೆ 10 ಗಂಟೆಗೆ ಕಚೇರಿಗೆ ಹಾಜರಾಗಿ ಕರ್ತವ್ಯ ಆ್ಯಪ್ ಮೂಲಕ ಹಾಜರಾತಿ ಹಾಕಬೇಕು ಜೊತೆಗೆ ಕೇಂದ್ರ ಸ್ಥಾನದಲ್ಲಿ ಇರಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸೂಚಿಸಿದ್ದಾರೆ.

ಸರ್ಕಾರಿ ಕಚೇರಿಗಳಲ್ಲಿ ಲಂಚ ಮುಕ್ತ ಕಚೇರಿ ಎಂದು ಫಲಕ ಅಳವಡಿಸುವುದರ ಜೊತೆಗೆ ನೋಡಲ್ ಅಧಿಕಾರಿ ನೇಮಕ ಮಾಡಬೇಕು. ಮೊಬೈಲ್ ನಂಬರ್ ಹಾಕಬೇಕು. ಯಾವುದೇ ದೂರು ಬಂದಲ್ಲಿ ಗಂಭೀರವಾಗಿ ಪರಿಗಣಿಸಲಾಗುವುದು ಎಂದು ತಿಳಿಸಿದರು.

### ಗ್ರಾಮ ಮಟ್ಟದಲ್ಲಿ ಜನ ಸ್ಪಂದನ

ಸಾರ್ವಜನಿಕರ ಕುಂದು ಕೊರತೆಗಳನ್ನು ಆಲಿಸಿ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಪ್ರತಿ ತಿಂಗಳ ಮೊದಲ ಶನಿವಾರ ತಾಲ್ಲೂಕು ಮಟ್ಟದಲ್ಲಿ, ಮೂರನೇ ಶನಿವಾರ ಜಿಲ್ಲಾ ಮಟ್ಟದಲ್ಲಿ ಜನಸ್ಪಂದನ ಕಾರ್ಯಕ್ರಮ ನಡೆಸಲಾಗುತ್ತಿದೆ. ಮುಂದೆ ಪ್ರತಿ ಮಾಹೆಯಲ್ಲಿ ಒಂದು ದಿನ ಗ್ರಾಮ ಮಟ್ಟದಲ್ಲಿ ಜನಸ್ಪಂದನ ಕಾರ್ಯಕ್ರಮ ನಡೆಸುವ ಮೂಲಕ ಸಮಸ್ಯೆಗಳನ್ನು ಅವಲೋಕಿಸಿ ಪರಿಹಾರಕ್ಕೆ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಅವರು ನಿರ್ದೇಶನ ನೀಡಿದ್ದಾರೆ ಎಂದು ತಿಳಿಸಿದರು.


ಸರ್ಕಾರಿ ಕಚೇರಿಗಳಲ್ಲಿ ಲಂಚ ಮುಕ್ತ ಕಚೇರಿ ಎಂದು ಫಲಕ ಅಳವಡಿಸುವುದರ ಜೊತೆಗೆ ನೋಡಲ್ ಅಧಿಕಾರಿ ನೇಮಕ ಮಾಡಬೇಕು ಮೊಬೈಲ್ ನಂಬರ್ ಹಾಕಬೇಕು. ಯಾವುದೇ ದೂರು ಬಂದಲ್ಲಿ ಗಂಭೀರವಾಗಿ ಪರಿಗಣಿಸಲಾಗುವುದು ಎಂದು ತಿಳಿಸಿದರು.




ಸರ್ಕಾರಿ ಕಚೇರಿಗಳಲ್ಲಿ ಗುಟ್ಕಾ, ಮದ್ಯಪಾನ, ಉಗುಳುವುದನ್ನು ನಿಷೇಧಿಸಿದೆ. ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧಿಸಲಾಗಿದ್ದು, ಧೂಮಪಾನ ಮಾಡುವುದು ಕಂಡುಬಂದಲ್ಲಿ ದಂಡ ವಿಧಿಸುವಂತೆ ತಿಳಿಸಿದರು. ಸರ್ಕಾರಿ ಕಚೇರಿಗಳಲ್ಲಿ ಧೂಮಪಾನ ಮುಕ್ತ ಕಚೇರಿ ಎಂದು ಫಲಕ ಅಳವಡಿಸಲು ಸೂಚಿಸಿದರು.

ಸರ್ಕಾರಿ ಕಟ್ಟಡಗಳು ವಾಸಿಸಲು ಯೋಗ್ಯವಾಗಿಲ್ಲದಿರುವುದನ್ನು ಗುರುತಿಸಿ ತಾಂತ್ರಿಕವಾಗಿ ಇಂಜಿನಿಯರ್‌ಗಳು ಪರಿಶೀಲನೆ ಮಾಡಬೇಕು. ಮೈಕ್ರೋ ಫೈನಾನ್ಸ್, ಚೈನ್ ಲಿಂಕ್ ಹಣಕಾಸು ವ್ಯವಹಾರ ನಡೆಸುವ ಕಂಪನಿಗಳನ್ನು ಗುರುತಿಸಿ ಅವರೊಂದಿಗೆ ಸಭೆ ನಡೆಸಿ ಜೊತೆಗೆ ಸಾರ್ವಜನಿಕರು ತೊಂದರೆಗೆ ಸಿಲುಕದಂತೆ ಅರಿವು ಮೂಡಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಘನ ತ್ಯಾಜ್ಯವನ್ನು ಸಮರ್ಪಕ ವಿಲೇವಾರಿಗೆ ಕ್ರಮವಹಿಸಲು ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಬಯೋಮೆಡಿಕಲ್ ವೇಸ್ಟ್ ಅನ್ನು ಎಲ್ಲೆಂದರಲ್ಲಿ ಹಾಕುತ್ತಿರುವುದು ಕಂಡುಬರುತ್ತಿದೆ. ಇದನ್ನು ಗಂಭೀರವಾಗಿ ಪರಿಗಣಿಸಲಾಗುವುದು ಎಂದು ತಿಳಿಸಿದರು.

ಕಲ್ಯಾಣ ಮಂಟಪ, ಆಸ್ಪತ್ರೆ, ಹಾಸ್ಟೆಲ್ ಮತ್ತಿತರ ಕಡೆಗಳಲ್ಲಿ ಬಲ್ಕ್ ಆಗಿ ಉತ್ಪಾದನೆ ಆಗುವ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಹಾಕಿದರೆ ವಿದ್ಯುತ್ ಕಡಿತಗೊಳಿಸುವುದರ ಜೊತೆಗೆ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸುರಕ್ಷತೆ ದೃಷ್ಟಿಯಿಂದ ದ್ವಿಚಕ್ರ ವಾಹನ ಚಾಲನೆ ಮಾಡುವಾಗ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಈ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕ್ರಮವಹಿಸಬೇಕು. ಇಲಾಖೆ ವತಿಯಿಂದ ನಗರದ ಮುಖ್ಯ ವೃತ್ತಗಳಲ್ಲಿ ಎ.ಎನ್.ಪಿ.ಎಲ್ ಕ್ಯಾಮೆರಾ ಅಳವಡಿಸಬೇಕು. ಸೂಚನಾ ಮತ್ತು ಎಚ್ಚರಿಕೆ ಫಲಕ ಅಳವಡಿಸುವುದು, ರಿಫ್ಲೆಕ್ಟರ್ ಬಿಳಿ ಬಣ್ಣದ ಪಟ್ಟೆ ಹಾಕಿಸಲು ಕ್ರಮಕೈಗೊಳ್ಳುವಂತೆ ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಸಾರ್ವಜನಿಕರ ಸುರಕ್ಷತೆ ದೃಷ್ಟಿಯಿಂದ ಜವಾಬ್ದಾರಿಯುತವಾಗಿ ಬಸ್ ಚಾಲನೆ ಮಾಡುವಂತೆ ಬಸ್ ಚಾಲಕರಿಗೆ ತರಬೇತಿ ನೀಡಿ ನಗರ ಪ್ರದೇಶಗಳಲ್ಲಿ ವೇಗದ ಮಿತಿ 40ಕ್ಕೆ ನಿಗದಿ ಪಡಿಸುವಂತೆ ಹಾಗೂ ವೃತ್ತಗಳಲ್ಲಿ ಎಚ್ಚರಿಕೆ ವಹಿಸಿ ಚಾಲನೆ ಮಾಡುವಂತೆ ಜೊತೆಗೆ ನಿಗದಿತ ಸ್ಥಳಗಳಲ್ಲಿ ಮಾತ್ರ ಬಸ್ ನಿಲುಗಡೆ ಮಾಡಲು ಚಾಲಕರಿಗೆ ಸೂಚಿಸುವಂತೆ ಕೆಎಸ್ ಆರ್‌ಟಿಸಿ ವಿಭಾಗಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಆಟೋಗಳನ್ನು ನಿಗದಿತ ಸ್ಥಳದಲ್ಲಿ ನಿಲುಗಡೆಗೆ ನಿಲ್ದಾಣಗಳನ್ನು ಗುರುತಿಸಿ ಎಂದರಲ್ಲದೆ ಟ್ರ್ಯಾಕ್ ನಿಲುಗಡೆಗೆ ಸ್ಥಳ ಗುರುತಿಸಬೇಕು. ರಸ್ತೆ ಸುರಕ್ಷತೆ ಕುರಿತು ಮಕ್ಕಳಿಗೆ ಜಾಗೃತಿ ಮೂಡಿಸಲು ಶಾಲೆಗಳಲ್ಲಿ ಪೋಸ್ಟರ್ ಅಳವಡಿಸಬೇಕು. ರಸ್ತೆ ಒತ್ತುವರಿ ತೆರವಿಗೆ ಕ್ರಮವಹಿಸಲು ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಪಾದಚಾರಿ ಮಾರ್ಗದಲ್ಲಿ ವ್ಯಾಪಾರ ವಹಿವಾಟು ನಡೆಸದಂತೆ ತೆರವುಗೊಳಿಸಲು ಸೂಚನೆ ನೀಡಿದರು.

## ಅನೈತಿಕ ಚಟುವಟಿಕೆಯ ಅಡ್ಡೆಯಾದ ಲಾಡ್ಜ್: ದಾಳಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಪಟ್ಟಣದ ಬಿಕ್ಕೋಡು ರಸ್ತೆಯ ಕಲ್ಯಾಣಿ ಸಮೀಪದಲ್ಲಿರುವ ಆರ್.ಕೆ. ಕಂಫರ್ಟ್ ಲಾಡ್ಜ್‌ನಲ್ಲಿ ಅನೈತಿಕ ಚಟುವಟಿಕೆ ನಡೆಯುತ್ತಿದೆ ಎಂಬ ಖಚಿತ ಮಾಹಿತಿಯ ಮೇರೆಗೆ ಪೊಲೀಸರು ದಾಳಿ ನಡೆಸಿ ಇಬ್ಬರನ್ನು ಬಂಧಿಸಿದ್ದಾರೆ.

ಇನ್ಸಪೆಕ್ಟರ್ ರೇವಣ್ಣ ಅವರ ನೇತೃತ್ವದ ತಂಡ ಸೋಮವಾರ ಸಂಜೆ ದಾಳಿ ನಡೆಸಿದ್ದು, ಲಾಡ್ಜ್‌ನ ಕೊಠಡಿಗಳನ್ನು ಪರಿಶೀಲಿಸಿದರು. ದಾಳಿಯ ವೇಳೆ ಪುರುಷರು ಹಾಗೂ ಮಹಿಳೆಯರು ಪತ್ತೆಯಾಗಿದ್ದು, ಅವರನ್ನು ವಿಚಾರಣೆಗಾಗಿ ವಶಕ್ಕೆ ಪಡೆಯಲಾಗಿದೆ ಎಂದು ತಿಳಿದುಬಂದಿದೆ.

ಕೊಠಡಿ ಸಂಖ್ಯೆ 1ರಲ್ಲಿ ಅನೈತಿಕ ಚಟುವಟಿಕೆ ನಡೆಯುತ್ತಿರುವುದು ಕಂಡುಬಂದಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗಿದೆ. ದಾಳಿಯ ಸಂದರ್ಭದಲ್ಲಿ ಹಣ ಹಾಗೂ ಇತರೆ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.



ಪಿಎಸ್‌ಐ ಶಶಿಕುಮಾರ್, ಎಎಸ್‌ಐ ಸೋಮಶೇಖರ್ ಗೌಡ ಸೇರಿದಂತೆ ಸಿಬ್ಬಂದಿ ಭಾಗವಹಿಸಿದ್ದರು.

## ಹಿಮ್ಸ್ ರೋಗಿಗಳ ಯೋಗ ಕ್ಷೇಮ ವಿಚಾರಿಸಿದ ಶಾಸಕ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಶಾಸಕ ಹೆಚ್.ಪಿ.ಸ್ವರೂಪ್ ಅವರು ಮಂಗಳವಾರ ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಭೇಟಿ ನೀಡಿ ರೋಗಿಗಳಿಗೆ ನೀಡಲಾಗುವ ಊಟ, ಹಾಸಿಗೆ ವ್ಯವಸ್ಥೆ, ಔಷಧೋಪಚಾರ ಕುರಿತು ವಾರ್ಡ್‌ಗಳಿಗೆ ಭೇಟಿ ನೀಡಿ ಮಾಹಿತಿ ಪಡೆದರು.

ನಂತರ ಕಚೇರಿಯಲ್ಲಿ ವೈದ್ಯಾಧಿಕಾರಿಗಳ ಸಭೆ ನಡೆಸಿ ಮೂಲಸೌಕರ್ಯಗಳ ಕೊರತೆ ಕುರಿತು ಮಾತುಕತೆ ನಡೆಸಿದರು.

ಈ ವೇಳೆ ಮಾತನಾಡಿದ ಶಾಸಕರು, ಮಳೆಗಾಲ ಆರಂಭವಾಗುತ್ತಿದ್ದು, ಶೀತ, ಜ್ವರ ಸೇರಿ ಅನೇಕ ರೀತಿಯ ರೋಗ-ರುಜಿನ ಕಾಣಿಸಿಕೊಳ್ಳುವ ಸಾಧ್ಯತೆ ಇದೆ. ಹಾಗಾಗಿ ರೋಗಿಗಳಿಗೆ ಯಾವುದೇ ರೀತಿಯ ಸಮಸ್ಯೆ ಆಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಆರೋಗ್ಯ ರಕ್ಷಣೆಗೆ ಏನೆಲ್ಲಾ ಅಗತ್ಯಗಳಿವೆಯೋ ಅವೆಲ್ಲವನ್ನು ಪೂರೈಸುವ ನಿಟ್ಟಿನಲ್ಲಿ ಇಲಾಖೆ, ಅಧಿಕಾರಿಗಳು ಹಾಗು ವೈದ್ಯರು ಕೆಲಸ ಮಾಡಬೇಕೆಂದು ಸಲಹೆ ನೀಡಿದರು.

ಸರ್ಕಾರಿ ಆಸ್ಪತ್ರೆಗೆ ಹೆಚ್ಚಿನ ಪ್ರಮಾಣದಲ್ಲಿ ಬಡವರು ಬರುತ್ತಾರೆ. ಅವರಿಗೆ ಸಮಸ್ಯೆಯಾಗಬಾರದು. ಬೇಕಾದ ಚಿಕಿತ್ಸೆ ನೀಡಿ ರೋಗ ರುಜಿನ ವಾಸಿ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಹಿಮ್ಸ್ ನಿರ್ದೇಶಕ ಡಾ. ರಾಜಣ್ಣ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ರಾಘವೇಂದ್ರ ಪ್ರಸಾದ್ ಹಾಗೂ ಇತರರಿದ್ದರು.

ಕನ್ನಡ ಪೋಸ್ಟ್

E-mail : kannadapostnews@gmail.com facebook.com / ಕನ್ನಡ post



# ಗ್ರಾಮೀಣ ಜನರಿಗೆ ಉಚಿತ ಚಿಕಿತ್ಸೆ ಮಠದ ಆಶಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಳೇಬೀಡು: ಮನೆ ಬಾಗಿಲಿಗೆ ಆರೋಗ್ಯ ಸೇವೆ ತಲುಪಿಸುವ ಕನಸು ನನಸಾಗಿದೆ. ಪುಷ್ಪಗಿರಿ ಮಠದಿಂದ ಸಂಚಾರಿ ಆಸ್ಪತ್ರೆ ಆರಂಭಿಸಲಾಗಿದ್ದು, ಗ್ರಾಮೀಣ ಜನರಿಗೆ ಉಚಿತ ಆರೋಗ್ಯ ಸೇವೆ ತಲುಪಲಿದೆ ಎಂದು ಪುಷ್ಪಗಿರಿ ಮಠದ ಸೋಮಶೇಖರ ಸ್ವಾಮೀಜಿ ಹೇಳಿದರು.

ಹೊಯ್ಸಳೇಶ್ವರ ದೇವಾಲಯ ಬಳಿ ಪುಷ್ಪಗಿರಿ ಮಠದ ಸಂಚಾರಿ ಆಸ್ಪತ್ರೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಗ್ರಾಮೀಣ ಜನರು ಪ್ರಾಥಮಿಕ ಚಿಕಿತ್ಸೆಗಾಗಿ ಪಟ್ಟಣಕ್ಕೆ ಅಲೆದಾಡುವುದು ತಪ್ಪಬೇಕು ಎಂದು ಮೊಬೈಲ್ ಹೆಲ್ತ್ ಕ್ಲಿನಿಕ್ ಆರಂಭಿಸಬೇಕು ಎಂಬುದು ಬಹುದಿನದ ಕನಸಾಗಿತ್ತು. ಮಠದಿಂದ ಕೈಗೊಂಡಿರುವ ಆರೋಗ್ಯ ಶಿಕ್ಷಣ ಹಾಗೂ ಸೇವೆಗೆ ಮಹಾಲಕ್ಷ್ಮಿ ಮಂಜಪ್ಪ ಆಸ್ಪತ್ರೆ ಕೈಜೋಡಿಸಿದೆ. ಆಸ್ಪತ್ರೆ ಮುಖ್ಯಸ್ಥ ಡಾ.ಉಮೇಶ್ ಅವರ ಸಹಕಾರ ಮರೆಯುವಂತಿಲ್ಲ ಎಂದರು.

ಸಂಚಾರಿ ಆಸ್ಪತ್ರೆಯಲ್ಲಿ ವೆಬ್ ಕ್ಯಾಮೆರಾ ಅಳವಡಿಸಲಾಗಿದೆ. ಹೀಗಾಗಿ ರೋಗಿಗಳಿಗೆ ಹೆಚ್ಚಿನ ಚಿಕಿತ್ಸೆ ಬೇಕಾದಾಗ ತಜ್ಞ ವೈದ್ಯರ ಸಲಹೆ ಸಹಕಾರದಿಂದ ಹೆಚ್ಚಿನ ಚಿಕಿತ್ಸೆ ಕೊಡುವುದಕ್ಕೂ ಅವಕಾಶವಿದೆ. ಸಂಚಾರಿ ಆಸ್ಪತ್ರೆಯಲ್ಲಿ ಒಬ್ಬರು ವೈದ್ಯರು, ಇಬ್ಬರು ನರ್ಸ್ ಹಾಗೂ ಇಬ್ಬರು ಪರೀಕ್ಷಕರು ಕೆಲಸ ಮಾಡುತ್ತಾರೆ. ರಕ್ತ, ಮೂತ್ರ, ಬಿಪಿ ಪರೀಕ್ಷೆ ಹಾಗೂ ಇಸಿಜಿ ಮಾಡಲಾಗುವುದು. ಮುಂದಿನ ದಿನದಲ್ಲಿ ಸಂಚಾರಿ ಆಸ್ಪತ್ರೆಗೆ ಹೈಟೆಕ್ ಸ್ವರೂಪ ನೀಡಲಾಗುವುದು. ಬೇರೆ ತಾಲ್ಲೂಕುಗಳಿಗೂ ಸಂಚಾರಿ ಆಸ್ಪತ್ರೆ ಸೇವೆ ವಿಸ್ತರಿಸುವ ಗುರಿ ಹೊಂದಿದ್ದೇವೆ ಎಂದು ಸ್ವಾಮೀಜಿ ಹೇಳಿದರು.

ಮಾಜಿ ಶಾಸಕ ಕೆ.ಎಸ್. ಲಿಂಗೇಶ್ ಮಾತನಾಡಿ, ಉತ್ತಮ ಬದುಕು ಕಟ್ಟಿಕೊಂಡು ನೆಮ್ಮದಿಯ ಜೀವನ ಸಾಗಿಸಬಹುದು ಎಂದು ಪುಷ್ಪಗಿರಿ ಮಠ ಉಚಿತ ಆರೋಗ್ಯ ಸೇವೆಗೆ ಮುಂದಾಗಿದೆ. ಗ್ರಾಮೀಣ ಮಹಿಳೆಯರ ಸಬಲೀಕರಣ, ಕೃಷಿಕರ ಶ್ರೇಯೋಭಿವೃದ್ದಿಗೆ ಸ್ವಾಮೀಜಿ ಶ್ರಮವಹಿಸಿದ್ದಾರೆ. ಕಾಯಿಲೆಗಳಿಗೆ ಆರಂಭದಲ್ಲಿ ಚಿಕಿತ್ಸೆ ಪಡೆದರೆ ದೊಡ್ಡದಾಗಿ ಉಲ್ಬಣಿಸುವುದಿಲ್ಲ. ಆರೋಗ್ಯ ಇದ್ದರೆ ಏನಾನ್ನಾದರೂ ಸಾಧಿಸಬಹುದು. ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಕೈ ಹಾಕಿರುವ ಸೋಮಶೇಖರ ಸ್ವಾಮೀಜಿ ಅವರೊಂದಿಗೆ ಎಲ್ಲರೂ ಕೈ ಜೋಡಿಸಬೇಕು ಎಂದರು.

ಕೆಪಿಎಸ್ ಶಾಲಾಭಿವೃದ್ಧಿ ಅಧ್ಯಕ್ಷ ಬಿ.ಎಸ್.ಸೋಮಶೇಖರ್ ಮಾತನಾಡಿ, ಜನರ ಇಂದಿನ ಆರೋಗ್ಯ ಸ್ಥಿತಿಗತಿಗೆ ಸಂಚಾರಿ ಆಸ್ಪತ್ರೆ ಅಗತ್ಯವಿದೆ. ಈ ನಿಟ್ಟಿನಲ್ಲಿ ಸೋಮಶೇಖರ ಸ್ವಾಮೀಜಿ ಅವರು ಸಂಚಾರಿ ಆಸ್ಪತ್ರೆ ಆರಂಭಿಸಿ ಇಂದಿನ ಸಮಾಜಕ್ಕೆ ದೊಡ್ಡ ಕಾಣಿಕೆ ನೀಡಿದ್ದಾರೆ. ಅವರ ಆರೋಗ್ಯ ಸೇವೆ ನಾಡಿನಾದ್ಯಂತ ವಿಸ್ತರಿಸಲಿ ಎಂದರು.

ಶಿಕ್ಷಕ ಎಸ್.ಈ. ಮಲ್ಲಿಕಾರ್ಜುನ ಮಾತನಾಡಿ ಮಾತನಾಡಿ, ಪುಷ್ಪಗಿರಿ ಶ್ರೀಗಳು ದೂರದೃಷ್ಟಿ ಹೊಂದಿದ್ದಾರೆ. ಆಸ್ಪತ್ರೆ ನಗರಕ್ಕೆ ಮಾತ್ರ ಸಿಮೀತವಾದರೆ, ಗ್ರಾಮೀಣ ಜನರ ಆರೋಗ್ಯ ಸುಧಾರಣೆಗೆ ಕಷ್ಟವಾಗುತ್ತದೆ ಎಂಬುದನ್ನು ಮನಗಂಡು ಸಂಚಾರಿ ಆಸ್ಪತ್ರೆ ಆರಂಭಿಸಿದ್ದಾರೆ. ಹತ್ತಾರು ಸಂಚಾರಿ ಆಸ್ಪತ್ರೆ ಆರಂಭಿಸುವ ಶಕ್ತಿ ಅವರಿಗೆ ದೊರಕಲಿ ಎಂದರು.

ಪಿಡಿಒ ಎಸ್.ಸಿ.ವಿರೂಪಾಕ್ಷ,, ಪುಷ್ಪಗಿರಿ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಯೋಜನಾಧಿಕಾರಿ ವಿನುತ ಧನಂಜಯ, ಮುಖಂಡರಾದ ರಘುನಾಥ, ಎಂ.ಸಿ.ಕುಮಾರ ಮಾತನಾಡಿದರು. ಗ್ರಾಪಂ ಅಧ್ಯಕ್ಷ ಎಚ್.ಆರ್.ಮಧು, ಸದಸ್ಯ ರಮೇಶ್, ಮುಖಂಡರಾದ ಭೈರೇಶ್, ಬೂದಿಗುಂಡಿ ಮಂಜು, ಅಡುಗೆ ರಾಜು, ಕೆ.ಪಿ.ಕುಮಾರ, ಕುಮಾರ ಭಾಗವಹಿಸಿದ್ದರು.

# ರಸಗೊಬ್ಬರ ಕೊರತೆ: ರೈತ ಸಂಘದಿಂದ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ: ಜಿಲ್ಲೆಯಲ್ಲಿ ರಸಗೊಬ್ಬರ ಕೊರತೆ ಎದುರಾಗಿದ್ದು, ಸಾವಿರಾರು ರೈತರು ಆತಂಕ ಮತ್ತು ಸಂಕಷ್ಟದ ನಡುವೆ ಕೃಷಿ ಚಟುವಟಿಕೆ ನಡೆಸುವಂತಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ರೈತ ಪರ್ವದ ಮುಖಂಡರು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಮುಂಗಾರು ಮಳೆ ಆರಂಭವಾಗುತ್ತಿದ್ದಂತೆ ರೈತರು ತಮ್ಮ ಜಮೀನುಗಳಲ್ಲಿ ಬಿತ್ತನೆ ಕಾರ್ಯ ಕೈಗೊಂಡಿದ್ದಾರೆ. ಅನೇಕರು ತಮ್ಮ ಚಿನ್ನಾಭರಣ ಗಿರವಿ ಇಟ್ಟು ಅಥವಾ ಸಾಲ ಮಾಡಿ ಬಿತ್ತನೆ ಬೀಜ, ಕೀಟನಾಶಕ ಹಾಗು ಇತರೆ ಕೃಷಿ ಸಾಮಗ್ರಿ ಖರೀದಿಸುತ್ತಿದ್ದಾರೆ. ಆದರೆ, ಅಗತ್ಯ ಪ್ರಮಾಣದಲ್ಲಿ ರಸಗೊಬ್ಬರ ದೊರೆಯದಿರುವುದು ರೈತರಲ್ಲಿ ತೀವ್ರ ಆತಂಕ ಉಂಟುಮಾಡಿದೆ ಎಂದರು.

ಪ್ರಸ್ತುತ ಸರ್ಕಾರಿ ಮಾರಾಟ ಕೇಂದ್ರಗಳು ಹಾಗೂ ಸಹಕಾರ ಸಂಘಗಳಲ್ಲಿ ಒಂದು ಎಕರೆಗೆ ಕೇವಲ 1 ಚೀಲ ರಸಗೊಬ್ಬರ ಮಾತ್ರ ವಿತರಿಸಲಾಗುತ್ತಿದೆ. ಇದು ಯಾವುದೇ ಬೆಳೆಗೆ ಸಾಕಾಗುವುದಿಲ್ಲ. ಭತ್ತ, ಮೆಕ್ಕೆಜೋಳ, ಶುಂಠಿ, ಅರಿಶಿನ, ಕಬ್ಬು ಸೇರಿ ವಿವಿಧ ಬೆಳೆಗಳಿಗೆ ಹೆಚ್ಚಿನ ಪ್ರಮಾಣದ ರಸಗೊಬ್ಬರ ಅಗತ್ಯವಿದೆ. ರಸಗೊಬ್ಬರ ಕೊರತೆ ದುರುಪಯೋಗಪಡಿಸಿಕೊಂಡು ಕೆಲ ಖಾಸಗಿ ಮಾರಾಟಗಾರರು ಹೆಚ್ಚಿನ ದರ ವಸೂಲಿ ಮಾಡುವ ಹಾಗು ರೈತರ ಮೇಲೆ ಅನಗತ್ಯ ಷರತ್ತು ವಿಧಿಸುವ ಬಗ್ಗೆ ದೂರು ಕೇಳಿಬರುತ್ತಿವೆ. ಜಿಲ್ಲಾಡಳಿತ ತಕ್ಷಣ ಮಧ್ಯ ಪ್ರವೇಶಿಸಿ ಜಿಲ್ಲೆಗೆ ಅಗತ್ಯ ಪ್ರಮಾಣದಲ್ಲಿ ರಸಗೊಬ್ಬರ ಪೂರೈಸಲು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ರೈತರಿಗೆ ಯಾವುದೇ ಮಿತಿ ವಿಧಿಸದೆ ಬೆಳೆಗಳ ಅವಶ್ಯಕತೆಗೆ ಅನುಗುಣವಾಗಿ ಸಮರ್ಪಕ ಪ್ರಮಾಣದಲ್ಲಿ ರಸಗೊಬ್ಬರ ವಿತರಿಸಬೇಕು. ಜೊತೆಗೆ ಕೃತಕ ಅಭಾವ ಸೃಷ್ಟಿ ಹಾಗೂ ಅಕ್ರಮ ದಾಸ್ತಾನು ಮಾಡುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು. ಇಲ್ಲದಿದ್ದರೆ ಹೋರಾಟ ತೀವ್ರಗೊಳಿಸುವ ಎಚ್ಚರಿಕೆ ನೀಡಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ಸಂಘದ ಮುಖಂಡ ಮೀಸೆ ಮಂಜಣ್ಣ, ತಾಲ್ಲೂಕು ಅಧ್ಯಕ್ಷ ಶಿವಣ್ಣ ಸಪ್ಪಿನಹಳ್ಳಿ, ಕೆ.ಎನ್. ರಾಮಚಂದ್ರ, ನಂದ ಕುಮಾರ್, ಪ್ರಕಾಶ್, ರಘು, ಸುರೇಶ್, ಮಂಜೇಗೌಡ, ವಿಜಯ್, ಚನ್ನೇಗೌಡ, ಮಮತೇಶ್ ಇದ್ದರು.

# ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಪರಿಶೀಲಿಸಿದ ಜಿಲ್ಲಾಧಿಕಾರಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಮಳೆಗಾಲ ಸಂದರ್ಭದಲ್ಲಿ ರಾಷ್ಟ್ರೀಯ ಹೆದ್ದಾರಿ 75ರಲ್ಲಿ ಭೂಕುಸಿತ ಮತ್ತು ರಸ್ತೆ ಹಾನಿ ಸಮಸ್ಯೆಗಳನ್ನು ತಡೆಗಟ್ಟಲು ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಯನ್ನು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಪರಿಶೀಲಿಸಿದರು.

ಪಟ್ಟಣದ ಗುರುವೇಗೌಡ ಕಲ್ಯಾಣ ಮಂಟಪದಲ್ಲಿ ನಡೆದ ಎಸ್ಐಆರ್ ತರಬೇತಿ ಕಾರ್ಯಕ್ರಮ ಬಳಿಕ ಅಧಿಕಾರಿಗಳೊಂದಿಗೆ ರಾಷ್ಟ್ರೀಯ ಹೆದ್ದಾರಿಗೆ ಭೇಟಿ ನೀಡಿದ ಅವರು ಸ್ಥಳೀಯರು ಹಾಗೂ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ, ಸಂಭವನೀಯ ಪ್ರಕೃತಿ ವಿಕೋಪ ಎದುರಿಸಲು ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ. ಸುಮಾರು 64 ಕಡೆ ಭೂಕುಸಿತ ತಡೆಗೆ ಕ್ರಮ ವಹಿಸಲಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಮಂಜರಾಬಾದ್ ಕೋಟೆ ಸಮೀಪದ ರಸ್ತೆ ಕಾಮಗಾರಿ ಉತ್ತಮವಾಗಿ ಪೂರ್ಣಗೊಂಡಿದ್ದು, ಈ ಭಾಗದಲ್ಲಿ ರಸ್ತೆ ಸಂಚಾರ ವ್ಯವಸ್ಥೆ ಸುಧಾರಿಸಿದೆ. ತಡೆಗೋಡೆಗಳು ಹಾಗು ಗ್ಯಾಬಿಯನ್ ವಾಲ್ ನಿರ್ಮಾಣ ಸೇರಿ ಹಲವು ಕಾಮಗಾರಿ ಪ್ರಗತಿಯಲ್ಲಿವೆ ಎಂದು ತಿಳಿಸಿದರು.

ಆನೆಮಹಲ್ ಪ್ರದೇಶದಲ್ಲಿ ಕಳೆದ ವರ್ಷ ಭೂಕುಸಿತದಿಂದ ಹೆಚ್ಚಿನ ಸಮಸ್ಯೆ ಎದುರಾಗಿದ್ದವು. ಈ ಹಿನ್ನಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಅಗತ್ಯ ಕಾಮಗಾರಿ ಈಗಾಗಲೇ ಕೈಗೆತ್ತಿಕೊಂಡಿದ್ದು, ಮಳೆಗಾಲ ಆರಂಭವಾಗಿರುವುದರಿಂದ ತ್ವರಿತವಾಗಿ ಕೆಲಸ ಮುಗಿಸುವಂತೆ ಸೂಚಿಸಿದರು.

### ಎತ್ತಿನಹೊಳೆಯಿಂದ ನೀರು ಎತ್ತುವ ಕಾರ್ಯ ಆರಂಭ

ಎತ್ತಿನಹೊಳೆ ಯೋಜನೆ ವ್ಯಾಪ್ತಿಯ ವಿವಿಧ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದೆ. ಜೂನ್ 15ರಿಂದ ಅ. 30ರ ವರೆಗೆ ನೀರು ಎತ್ತುವ ಕಾರ್ಯ ನಡೆಯಲಿದ್ದು, ಈ ಹಿನ್ನೆಲೆಯಲ್ಲಿ ಮೋಟಾರ್ ಹಾಗೂ ಪಂಪ್‌ಗಳ ಕಾರ್ಯಾರಂಭಕ್ಕೆ ಚಾಲನೆ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಯೋಜನೆಯ ವಿವಿಧ ಘಟಕಗಳ ಕಾರ್ಯಕ್ಷಮತೆ ಪರಿಶೀಲಿಸಿ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗಿದೆ.ನೀರು ಎತ್ತುವ ಪ್ರಕ್ರಿಯೆ ಸುಗಮವಾಗಿ ನಡೆಯಲು ಅಗತ್ಯ ಸೂಚನೆಗಳನ್ನು ನೀಡಲಾಗಿದೆ ಎಂದರು.

ಉಪ ವಿಭಾಗಾಧಿಕಾರಿ ಹುಲಿಮನೆ ತಿಮ್ಮಣ್ಣ, ತಹಶೀಲ್ದಾರ್ ಸುಪ್ರೀತಾ, ಇಂಜಿನಿಯರ್ ವೆಂಕಟೇಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮೊಹಮ್ಮದ್ ಇಕ್ಬಾಲ್, ಪ್ರಮೋದ್, ರಾಷ್ಟ್ರೀಯ ಹೆದ್ದಾರಿಯ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಸಲ್ಮಾ, ಪ್ರಸನ್ನ ಮತ್ತಿತರರಿದ್ದರು.

# ಸುಂಡಹಳ್ಳಿಯಲ್ಲಿ ನಾಟಿ ಕೋಳಿ ಸಾರು-ಮುದ್ದೆ ಸ್ಪರ್ಧೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಗ್ರಾಮೀಣ ಸಂಸ್ಕೃತಿ ಮತ್ತು ಸಾಂಪ್ರದಾಯಿಕ ಆಹಾರ ಪದ್ಧತಿಯನ್ನು ಉತ್ತೇಜಿಸುವ ಉದ್ದೇಶದಿಂದ ನಾಟಿ ಕೋಳಿ ಸಾರು-ಮುದ್ದೆ ಉಣ್ಣುವ ಸ್ಪರ್ಧೆಯನ್ನು ಆಯೋಜಿಸಲಾಗಿದ್ದು, ಇಂತಹ ಕಾರ್ಯಕ್ರಮಗಳು ಗ್ರಾಮೀಣ ಪರಂಪರೆಯನ್ನು ಉಳಿಸಿ ಬೆಳೆಸಲು ಹಾಗೂ ಮುಂದಿನ ಪೀಳಿಗೆಗೆ ಪರಿಚಯಿಸಲು ಸಹಕಾರಿಯಾಗುತ್ತವೆ ಎಂದು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಎಸ್.ಆರ್.ರಘು ಹೇಳಿದರು.

ತಾಲ್ಲೂಕಿನ ಸುಂಡಹಳ್ಳಿ ಗ್ರಾಮದಲ್ಲಿ ಶ್ರೀ ಕೆರೆಕೋಡಮ್ಮ ಯುವಕ ಸಂಘದ ವತಿಯಿಂದ ಆಯೋಜಿಸಿದ್ದ ಎರಡನೇ ವರ್ಷದ ನಾಟಿ ಕೋಳಿ ಸಾರು-ಮುದ್ದೆ ಉಣ್ಣುವ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿದ ಅವರು, ಯುವ ಜನಾಂಗ ಪಾಶ್ಚಾತ್ಯ ತಿನಿಸುಗಳಿಗೆ ಮನಸೋತು ಆರೋಗ್ಯಕರವಾದ ದೇಸಿ ಆಹಾರವನ್ನು ನಿರ್ಲಕ್ಷಿಸುತ್ತಿದ್ದು, ಇಂತಹ ಸ್ಪರ್ಧೆಗಳ ಮೂಲಕ ರಾಗಿಯ ಮಹತ್ವವನ್ನು ಸಾರುವ ಕಾರ್ಯ ಶ್ಲಾಘನೀಯ ಎಂದರು.

ಈ ಸ್ಪರ್ಧೆಯಲ್ಲಿ ವಿವಿಧ ವಯೋಮಾನದ ಸ್ಪರ್ಧಿಗಳು ಉತ್ಸಾಹದಿಂದ ಭಾಗವಹಿಸಿ ಗಮನ ಸೆಳೆದರು. ಸ್ಪರ್ಧೆಯಲ್ಲಿ ಭಾಗವಹಿಸುವವರಿಗೆ 300 ರೂಪಾಯಿ ಪ್ರವೇಶ ಶುಲ್ಕ ನಿಗದಿ ಪಡಿಸಲಾಗಿತ್ತು. ನಾಟಿಕೋಳಿ ಸಾರು, ಮಾಂಸದ ಜತೆಗೆ 250 ಗ್ರಾಂ ತೂಕದ ಮುದ್ದೆಯನ್ನು ನೀಡಲಾಗಿದ್ದು, ಸ್ಪರ್ಧೆಗೆ 45 ನಿಮಿಷ ಕಾಲಾವಕಾಶ ನೀಡಲಾಗಿತ್ತು. ನಿಗದಿತ ಸಮಯದಲ್ಲಿ ಹೆಚ್ಚು ಮುದ್ದೆ ಮತ್ತು ನಾಟಿ ಕೋಳಿ ಸಾರು ಸೇವಿಸಿದ ಸ್ಪರ್ಧಿಗಳಿಗೆ ಬಹುಮಾನಗಳನ್ನು ನೀಡಲಾಯಿತು.

ಸ್ಪರ್ಧೆಯಲ್ಲಿ ಸುಂಡಹಳ್ಳಿ ಗ್ರಾಮದ ಯೋಗೇಶ ತಲಾ 250 ಗ್ರಾಂ ತೂಕದ 12 ಮುದ್ದೆಗಳನ್ನು (3 ಕೆ.ಜಿ.) ತಿಂದು ಪ್ರಥಮ ಸ್ಥಾನದೊಂದಿಗೆ 10 ಸಾವಿರ ಬಹುಮಾನ ಪಡೆದುಕೊಂಡರೆ. ಹಿರಿಬಿಳ್ತಿ ಗ್ರಾಮದ ನಾಗೇಗೌಡ 10 ಮುದ್ದೆಗಳನ್ನು (2.5 ಕೆ.ಜಿ.) ತಿಂದು ದ್ವಿತೀಯ ಸ್ಥಾನದೊಂದಿಗೆ 7 ಸಾವಿರ ಬಹುಮಾನ, ಹಳೆಬೆಳಗೊಳ ಗ್ರಾಮದ ದರ್ಶನ್ 9 ಮುದ್ದೆಗಳನ್ನು ತಿಂದು ತೃತೀಯ ಸ್ಥಾನದೊಂದಿಗೆ 5 ಸಾವಿರ ಬಹುಮಾನ ಹಾಗೂ ಹಳೆಬೆಳಗೊಳ ಗ್ರಾಮದ ಕವನ್‌ರಾಜ್ 9 ಮುದ್ದೆಗಳನ್ನು ತಿಂದು ತೃತೀಯ ಸ್ಥಾನದೊಂದಿಗೆ 3 ಸಾವಿರ ಬಹುಮಾನ ಹಾಗೂ ಪಾರಿತೋಷಕ ಪಡೆದುಕೊಂಡರು.

ಸ್ಪರ್ಧೆಯನ್ನು ವೀಕ್ಷಿಸಲು ಸುತ್ತಮುತ್ತಲಿನ ಗ್ರಾಮಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನರು ಆಗಮಿಸಿದ್ದರು. ಸ್ಪರ್ಧೆಯು ಜನರ ಮೆಚ್ಚುಗೆಗೆ ಪಾತ್ರವಾಗಿ ಸಂಭ್ರಮದ ವಾತಾವರಣದಲ್ಲಿ ಯಶಸ್ವಿಯಾಗಿ ನೆರವೇರಿತು.

ಈ ಸಂದರ್ಭದಲ್ಲಿ ಶ್ರೀ ಕೆರೆಕೋಡಮ್ಮ ಯುವಕ ಸಂಘದ ಪದಾಧಿಕಾರಿಗಳಾದ ಜಯಕುಮಾರ್, ಗುರು, ರವಿಕುಮಾರ, ಚಂದು, ಸತೀಶ್ ಹಾಗೂ ಗ್ರಾಮಸ್ಥರು ಇದ್ದರು.

# 165ಗ್ರಾಂ ಚಿನ್ನಾಭರಣ ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮನೆಯಲ್ಲಿ ಯಾರೂ ಇಲ್ಲದಾಗ ಬೀಗ ಮುರಿದು ಒಳನುಗ್ಗಿರುವ ಕಳ್ಳರು ಪ್ರತ್ಯೇಕ ಪ್ರಕರಣದಲ್ಲಿ 165 ಗ್ರಾಂ ಚಿನ್ನ ಹಾಗೂ ಬೆಳ್ಳಿ ಆಭರಣ ಕಳವು ಮಾಡಿರುವ ಘಟನೆ ಬಿಟ್ಟಗೌಡನಹಳ್ಳಿಯಲ್ಲಿ ನಡೆದಿದೆ.

ನಿವಾಸಿ ಹೆಚ್.ಸಿ.ಅಪೂವಿ ಎಂಬುವವರು ಮನೆಗೆ ಬೀಗ ಹಾಕಿ ಜೂ. 12ರಂದು ಕುಟುಂಬ ಸಮೇತ ಸಂಬಂಧಿಕರ ಊರಿಗೆ ತೆರಳಿದ್ದರು. ಜೂ. 14ರಂದು ವಾಪಾಸ್ ಬಂದಾಗ ಮನೆ ಬಾಗಿಲು ಮುರಿದಿರುವುದು ಗೊತ್ತಾಗಿದೆ. ಬೀರುವಿನಲ್ಲಿಟ್ಟದ್ದ 155 ಗ್ರಾಂ ತೂಕದ ಅಂದಾಜು 9.84 ಲಕ್ಷ ರೂ. ಮೌಲ್ಯದ ಚಿನ್ನಾಭರಣ, 2 ಲಕ್ಷ ರೂ. ನಗದು ಹಾಗೂ 250 ಗ್ರಾಂ ತೂಕದ ಬೆಳ್ಳಿ ಸಾಮಗ್ರಿ, ಕಳವು ಮಾಡಿದ್ದಾರೆ.

ಮತ್ತೊಂದು ಪ್ರಕರಣದಲ್ಲಿ ಪಲ್ಲವಿ ಎಂಬುವವರ ಮನೆ ಬಾಗಿಲು ಮುರಿದು ಪ್ರವೇಶಿಸಿರುವ ಕಳ್ಳರು ಬೀರುವಿನಲ್ಲಿಟ್ಟದ್ದ 10 ಗ್ರಾಂ ತೂಕದ ಚಿನ್ನಾಭರಣ, 200 ಗ್ರಾಂ ತೂಕದ ಬೆಳ್ಳಿ ಆಭರಣ ಹಾಗೂ 15 ಸಾವಿರ ರೂ. ನಗದು ಕದ್ದಿದ್ದಾರೆ.

ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇತಿಹಾಸದಲ್ಲಿ ಈ ದಿನ

## ಜೂನ್-17

1885: ಅಮೆರಿಕದ ಪ್ರಸಿದ್ಧ ಸ್ವಾತಂತ್ರ್ಯದ ಸಂಕೇತವಾದ ಸ್ಟ್ಯಾಚ್ಯೂ ಆಫ್ ಲಿಬರ್ಟಿ ಪ್ರತಿಮೆ ಫ್ರಾನ್ಸ್‌ನಿಂದ ನ್ಯೂಯಾರ್ಕ್‌ಗೆ ತಲುಪಿತು.

1940: ನೇತಾಜಿ ಸುಭಾಷ್ ಚಂದ್ರ ಬೋಸ್ ಅವರು ಬ್ರಿಟಿಷರ ವಿರುದ್ಧದ ಹೋರಾಟದ ಹಿನ್ನೆಲೆಯಲ್ಲಿ ಗೃಹಬಂಧನಕ್ಕೊಳಗಾದರು.

1972: ಅಮೆರಿಕದಲ್ಲಿ ನಡೆದ ವಾಟರ್‌ಗೇಟ್ ಹಗರಣ ಬಹಿರಂಗಗೊಂಡ ಘಟನೆಗೆ ಕಾರಣವಾದ ಕಳ್ಳತನ ಪ್ರಕರಣ ನಡೆಯಿತು.

1994: ಅಮೆರಿಕದ ಮಾಜಿ ಫುಟ್ಬಾಲ್ ಆಟಗಾರ ಒ.ಜೆ. ಸಿಂಪ್ಸನ್ ಬಂಧನ ತಪ್ಪಿಸಲು ನಡೆಸಿದ ಕಾರು ಬೆನ್ನಟ್ಟುವಿಕೆ ವಿಶ್ವದಾದ್ಯಂತ ನೇರ ಪ್ರಸಾರವಾಯಿತು.

### ಜನನ

1882: ಇಗೋರ್ ಸ್ಟ್ರಾವಿನ್ಸ್ಕಿ, ಖ್ಯಾತ ಸಂಗೀತ ಸಂಯೋಜಕ

1917: ಎಂ.ಜಿ. ರಾಮಚಂದ್ರನ್

### ನಿಧನ

1631: ಭಾರತದ ಮೊಘಲ್ ಸಾಮ್ರಾಟ ಮುಮ್ತಾಜ್ ಮಹಲ್

2013: ರಿತುಪರ್ಣೋ ಘೋಷ್, ಖ್ಯಾತ ಬಂಗಾಳಿ ಚಲನಚಿತ್ರ ನಿರ್ದೇಶಕ

# ಜಿಲ್ಲೆಯಲ್ಲಿ ಮಿತಿ ಮೀರಿದೆ ರಸಗೊಬ್ಬರ ಕೊರತೆ: ಕೆಆರ್‌ಎಸ್




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಸಗೊಬ್ಬರ ಬೆಲೆಯಲ್ಲಿ ವ್ಯಾಪಾರಿಗಳು ದಿಢೀರ್ ಏರಿಕೆ ಮಾಡಿರುವುದರಿಂದ ರೈತರಿಗೆ ತೊಂದರೆಯಾಗುತ್ತಿದೆ. ಜೊತೆಗೆ ಒಂದು ಎಕರೆಗೆ ಒಂದು ಚೀಲ ಮಾತ್ರ ರಸಗೊಬ್ಬರ ನೀಡುತ್ತಿರುವುದು ಸಮಸ್ಯೆ ಸೃಷ್ಟಿಸಿದ್ದು ಜಿಲ್ಲಾಡಳಿತ ಪರಿಹಾರ ಕ್ರಮ ಕೈಗೊಳ್ಳಬೇಕೆಂದು ಕರ್ನಾಟಕ ರಾಷ್ಟ್ರ ಸಮಿತಿ ಜಿಲ್ಲಾಧ್ಯಕ್ಷ ದೇವರಾಜ್ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಅವರು, ಇದೀಗ ಯೂರಿಯಾ ಮತ್ತು ಡಿಎಪಿ ಗೊಬ್ಬರವನ್ನು ದುಪ್ಪಟ್ಟು ಬೆಲೆಗೆ ಮಾರಾಟ ಮಾಡುತ್ತಿದ್ದರೂ ಕೃಷಿ ಸೇರಿ ಸಂಬಂಧಪಟ್ಟ ಇಲಾಖೆಯವರು ಕಣ್ಮುಚ್ಚಿ ಕುಳಿತಿದ್ದಾರೆ ಎಂದು ದೂರಿದರು.

45 ಕೆ.ಜಿ.ಯ 1 ಚೀಲ ಯೂರಿಯಾವನ್ನು 266 ರೂ.ಗೆ ಮಾರಾಟ ಮಾಡಬೇಕಿತ್ತು. ಆದರೆ 320 ರಿಂದ 600 ರೂ. ವರೆಗೂ ಮಾರಾಟ ಮಾಡಲಾಗುತ್ತಿದೆ. ಹಾಗೆಯೇ 50 ಕೆ.ಜಿ. ಡಿಎಪಿ ಬೆಲೆ 1350 ರೂ. ಇದ್ದರೆ 2,100 ರೂ. ವರೆಗೂ ಮಾರಾಟ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ಮತ್ತೊಂದೆಡೆ ರಸಗೊಬ್ಬರ ಕಂಪನಿಗಳು ಲಿಂಕ್ ಪ್ರಾಡೆಕ್ಟ್ ಹೆಸರಿನಲ್ಲಿ ರೈತರನ್ನು ಸುಲಿಗೆ ಮಾಡುತ್ತಿವೆ. ನ್ಯಾನೋ ಯೂರಿಯಾ ಖರೀದಿಸಲೇಬೇಕೆಂಬ ಕಟ್ಟುನಿಟ್ಟಿನ ನಿಯಮವನ್ನು ಸಡಿಲಗೊಳಿಸಬೇಕೆಂದು ಆಗ್ರಹಿಸಿದರು.


ರಸಗೊಬ್ಬರ ಮಾರಾಟಗಾರರು ಎಫ್‌ಸಿಒ 1985 ಷರತ್ತುಗಳ ಪ್ರಕಾರ ಮಳಿಗೆಯಲ್ಲಿ ಬೆಲೆ, ದಾಸ್ತಾನು ವಿವರ ಇತ್ಯಾದಿಗಳನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು. ರಸಗೊಬ್ಬರ ಅಕ್ರಮಗಳ ಬಗ್ಗೆ ದೂರು ನೀಡಲು ಸಂಬಂಧಪಟ್ಟ ತಾಲ್ಲೂಕು ಸಹಾಯಕ ಕೃಷಿ ಅಧಿಕಾರಿಯ ಮೊಬೈಲ್ ನಂಬರ್ ಪ್ರದರ್ಶನ ಮಾಡಬೇಕು. ರಸಗೊಬ್ಬರ ಮಾರಾಟ ಕಂಪನಿಯವರು ಕಡ್ಡಾಯವಾಗಿ ರಸಗೊಬ್ಬರಗಳನ್ನು ಡೀಲರ್‌ಗಳಿಗೆ ನಿಯಮ ಪ್ರಕಾರ ಅಂಗಡಿಗಳ ಬಾಗಿಲಿಗೆ ಮಾಡುವುದನ್ನು ಖಾತ್ರಿಪಡಿಸಬೇಕು.

ರಸಗೊಬ್ಬರ ಕಂಪನಿಗಳು ಸಬ್ಸಿಡಿ ರಸಗೊಬ್ಬರದ ಜೊತೆಗೆ ಡೀಲರ್‌ಗಳಿಗೆ ಲಿಂಕ್ ಪ್ರಾಡೆಕ್ಟ್ ನೀಡುವುದನ್ನು ನಿಲ್ಲಿಸಬೇಕು. ಮತ್ತು ಡೀಲರ್‌ಗಳು ಲಿಂಕ್ ಪ್ರಾಡಕ್ಟ್ ರೈತರಿಗೆ ಬಲವಂತವಾಗಿ ಮಾಡುವುದನ್ನು ನಿಲ್ಲಿಸಬೇಕು ಎಂದರು.

ಸುದ್ದಿಗೋಷ್ಠಿಯಲ್ಲಿ ಕೆಆರ್‌ಎಸ್ ಉಪಾಧ್ಯಕ್ಷ ನಿರಂಜನ್, ಜಗದೀಶ್, ವಿ.ರಮೇಶ್, ಗಣೇಶ್ ಇದ್ದರು.

# ಕೆಪಿಟಿಸಿಎಲ್ ನೌಕರರ ಪರ ಸಿ.ಎಂ.ಗೆ ಶಾಸಕ ಸ್ವರೂಪ್ ಪತ್ರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ವಿದ್ಯುತ್ ನಿಗಮವನ್ನು ಖಾಸಗಿ ಕಂಪನಿಗೆ ವಹಿಸುವ ನಿರ್ಧಾರದಿಂದ ಹಿಂದೆ ಸರಿಯಬೇಕೆಂದು ಆಗ್ರಹಿಸಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಶಾಸಕ ಹೆಚ್.ಪಿ.ಸ್ವರೂಪ್ ಪತ್ರ ಬರೆದಿದ್ದಾರೆ.

ಟಾಟಾ ಪವರ್ ಕಂಪನಿ ರಾಜ್ಯದಲ್ಲಿ ವಿದ್ಯುತ್ ವಿತರಣೆ ಮಾಡಲು ಪರವಾನಗಿ ಕೋರಿ ಕೆಇಆರ್‌ಸಿಗೆ ಸಲ್ಲಿಸಿರುವ ಅರ್ಜಿಯನ್ನು ತಿರಸ್ಕರಿಸಬೇಕು. ರಾಜ್ಯದಲ್ಲಿ ಸರ್ಕಾರಿ ಅಧೀನದ ಎಲ್ಲಾ ವಿದ್ಯುತ್ ವಿತರಣಾ ಕಂಪನಿಗಳು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ. ಈ ಕಂಪನಿಗಳು ನೌಕರರು, ಸಾರ್ವಜನಿಕರು, ರೈತರು ಹಾಗೂ ಕೈಗಾರಿಕೋದ್ಯಮಿಗಳಿಗೆ ಉತ್ತಮ ಸೇವೆ ನೀಡುತ್ತಿವೆ. ಸರ್ಕಾರದ ಎಲ್ಲಾ ಜನಪರ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುತ್ತಿವೆ ಎಂದು ಶಾಸಕರು ಪ್ರತಿಪಾದಿಸಿದ್ದಾರೆ.

ವಿದ್ಯುತ್ ವಿತರಣಾ ಕ್ಷೇತ್ರವನ್ನು ಖಾಸಗೀಕರಣಗೊಳಿಸಿದರೆ ಸರ್ಕಾರದ ನಿಯಂತ್ರಣ ತಪ್ಪುತ್ತದೆ.

ಅದರಿಂದ ನೌಕರರು, ಸಾರ್ವಜನಿಕರು, ರೈತರಿಗೆ ಹಾಗೂ ಕೈಗಾರಿಕೋದ್ಯಮಿಗಳಿಗೆ ಭಾರೀ ಅನ್ಯಾಯವಾಗುತ್ತದೆ. ಖಾಸಗಿ ಕಂಪನಿಗಳ ಮೇಲೆ ಸರ್ಕಾರದ ಯಾವುದೇ ನಿಯಂತ್ರಣವಿರುವುದಿಲ್ಲ ಎಂದು ಕೆಪಿಟಿಸಿಎಲ್ ನೌಕರರ ಒಕ್ಕೂಟದ ಪ್ರತಿನಿಧಿಗಳು ಆತಂಕ ವ್ಯಕ್ತಪಡಿಸಿದ್ದಾರೆ.

ಆದ್ದರಿಂದ ಟಾಟಾ ಪವರ್ ಕಂಪನಿಯು ಸಲ್ಲಿಸಿರುವ ಅರ್ಜಿಯನ್ನು ತಕ್ಷಣವೇ ತಿರಸ್ಕರಿಸಬೇಕು. ವಿದ್ಯುತ್ ವಿತರಣಾ ಕಂಪನಿಗಳು ಎಂದಿನಂತೆ ರಾಜ್ಯ ಸರ್ಕಾರದ ಅಧೀನದಲ್ಲಿಯೇ ಕಾನೂನುಬದ್ಧವಾಗಿ ಕಾರ್ಯನಿರ್ವಹಿಸುವಂತೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ.

ತಮ್ಮ ಪರವಾಗಿ ಧ್ವನಿ ಎತ್ತಬೇಕೆಂದು ಕೆಪಿಟಿಸಿಎಲ್ ನೌಕರರ ಒಕ್ಕೂಟದ ಪದಾಧಿಕಾರಿಗಳು ಶಾಸಕರನ್ನು ಒತ್ತಾಯಿಸಿದ್ದರು.

# ಜು.26 ರಂದು ಚನ್ನರಾಯಪಟ್ಟಣದಲ್ಲಿ ಪತ್ರಿಕಾ ದಿನಾಚರಣೆ

ಚನ್ನರಾಯಪಟ್ಟಣ: ಪಟ್ಟಣದ ಹೊರ ವಲಯದಲ್ಲಿರುವ ಬೆಲಸಿಂದ ಶ್ರೀವನದಲ್ಲಿ ಜು. 26ರಂದು ಪತ್ರಿಕಾ ದಿನಾಚರಣೆ ಹಮ್ಮಿಕೊಳ್ಳಲಾಗಿದೆ ಎಂದು ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದಯಾನಂದ ಶೆಟ್ಟಿಹಳ್ಳಿ ಹೇಳಿದರು. ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾ ದಿನಾಚರಣೆ ಕುರಿತ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಹಾಗೂ ಜಿಲ್ಲಾ ಸಂಘದ ಮಾರ್ಗದರ್ಶನದಂತೆ ಮತ್ತು ಸಂಘದ ಪದಾಧಿಕಾರಿಗಳ ಸಹಮತದೊಂದಿಗೆ ದಿನಾಂಕ ನಿಗದಿಪಡಿಸಲಾಗಿದೆ ಎಂದರು. ಸಂಸದ ಶ್ರೇಯಸ್ ಪಟೇಲ್, ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ, ಶಾಸಕ ಸಿ.ಎನ್ .ಬಾಲಕೃಷ್ಣ, ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ.ಗೋಪಾಲಸ್ವಾಮಿ, ಬಿಜೆಪಿ ಮುಖಂಡ ಚಿದಾನಂದ್, ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ರಾಜ್ಯ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ, ಜಿಲ್ಲಾಧ್ಯಕ್ಷ ಜೆ.ಆರ್.ಕೆಂಚೇಗೌಡ, ಉಸ್ತುವಾರಿ ನಂಜುಂಡೇಗೌಡ ಪಾಲ್ಗೊಳ್ಳಲಿದ್ದಾರೆ. ವಿವಿಧ ಕ್ಷೇತ್ರಗಳ ಗಣ್ಯರನ್ನು ಆಹ್ವಾನಿಸಲಾಗುವುದು ಎಂದು ಮಾಹಿತಿ ನೀಡಿದರು. ವಾಡಿಕೆಯಂತೆ ಇಬ್ಬರು ಪತ್ರಕರ್ತರು ಹಾಗೂ ವ್ಯಾಪ್ತಿಯ ವಿತರಕರಿಗೆ ಸನ್ಮಾನಿಸಲಾಗುವುದು. ವಿಶೇಷವಾಗಿ ಪತ್ರಕರ್ತರಿಗೆ, ಕುಟುಂಬದ ಸದಸ್ಯರಿಗೆ ಹಾಗೂ ಮಕ್ಕಳಿಗೆ ಕ್ರೀಡಾಕೂಟ ಆಯೋಜಿಸಲಾಗಿದೆ. ಎಲ್ಲಾ ಪತ್ರಿಕೆಗಳನ್ನು ಪ್ರದರ್ಶನದಲ್ಲಿ ಇರಿಸಲಾಗುವುದು. ಸಮಾಜದ ಅಂಕು ಡೊಂಕುಗಳನ್ನು ತಮ್ಮ ಬರವಣಿಗೆಯ ಮೂಲಕ ತಿದ್ದಿ ಸಮಾಜದ ಒಳಿತಿಗಾಗಿ ಶ್ರಮಿಸುವ ಪತ್ರಕರ್ತರು ತಮ್ಮ ಆರೋಗ್ಯದ ಕಡೆಗೂ ಗಮನ ಹರಿಸಬೇಕು. ತಮ್ಮನ್ನೇ ನಂಬಿಕೊಂಡು ಕುಟುಂಬವಿದೆ. ಕಳೆದ ತಿಂಗಳು ಬೆಳ್ಳೂರು ಕ್ರಾಸ್ ಆದಿಚುಂಚನಗಿರಿ ಆಸ್ಪತ್ರೆಯಲ್ಲಿ ಪತ್ರಕರ್ತರ ಕುಟುಂಬದ ಸದಸ್ಯರಿಗೆ ಆರೋಗ್ಯ ಉಚಿತ ತಪಾಸಣೆ ಕೈಗೊಳ್ಳಲಾಗಿತ್ತು ಎಂದರು.

ಕಳೆದ ವಾರ ಸಂಘದ ಕಚೇರಿಯಲ್ಲಿ ಕಾನೂನು ಸಮಾಲೋಚನೆ ಹಾಗೂ ಸಂವಾದ ಕಾರ್ಯಕ್ರಮ ಏರ್ಪಡಿಸಿದ್ದು ಚನ್ನರಾಯಪಟ್ಟಣ ನ್ಯಾಯಾಲಯದ ಜಿಲ್ಲಾ 4 ನೇ ಅಧಿಕ ಮತ್ತು ಸತ್ರ ನ್ಯಾಯಾಧೀಶರಾದ ಎಂ.ಎಸ್.ಕಲ್ಪನಾ ಹಾಗು ಪ್ರಧಾನ ಸಿವಿಲ್ ನ್ಯಾಯಾಧೀಶರಾದ ವಿ.ಕುಸುಮಾ ಅವರು ಕಾನೂನಿನಡಿ ಜನಸಾಮಾನ್ಯರ ಬದುಕಿನ ಬಗ್ಗೆ ವಿಸ್ತಾರವಾಗಿ ಚರ್ಚಿಸಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248